# All India Radio: Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**10.11.2025 19.35 p.m.**

**ಮುಖ್ಯಾಂಶಗಳು**

1. **ಅಂಗೋಲಾ ಸಂಸತ್ ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ**
2. **ಬಿಹಾರ ವಿಧಾನಸಭೆ ಚುನಾವಣೆ: ಎರಡನೇ ಹಂತದಲ್ಲಿ 122 ಕ್ಷೇತ್ರಗಳಿಗೆ ನಾಳೆ ಮತದಾನ**
3. **ಎರಡು ದಿನಗಳ ಭೇಟಿಗಾಗಿ ನಾಳೆ ಭೂತಾನ್‌ಗೆ ಪ್ರಧಾನಿ ನರೇಂದ್ರ ಮೋದಿ**
4. **ಕಳೆದ ಸಾಲಿನಲ್ಲಿ ದೇಶದಲ್ಲಿ 1 ಲಕ್ಷ 51 ಕೋಟಿ ರೂಪಾಯಿ ಮೌಲ್ಯದ ರಕ್ಷಣಾ ಉತ್ಪಾದನೆ – ರಕ್ಷಣಾ ಸಚಿವ ರಾಜನಾಥ್ ಸಿಂಗ್**
5. **ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಅರ್ಥಪೂರ್ಣ ಚರ್ಚೆಗೆ ಲೋಕಸಭಾಧ್ಯಕ್ಷರ ಮನವಿ**

****************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಲುವಾಂಡಾದಲ್ಲಿ ಅಂಗೋಲಾ ಸಂಸತ್ ಉದ್ದೇಶಿಸಿ ಭಾಷಣ ಮಾಡಿದರು.

ಸ್ವಾತಂತ್ರ್ಯ ಹೋರಾಟದಿಂದ ಶಾಂತಿ ಮತ್ತು ಪ್ರಜಾಪ್ರಭುತ್ವದತ್ತ ಅಂಗೋಲಾದ ಸ್ಫೂರ್ತಿದಾಯಕ ಪ್ರಯಾಣವನ್ನು ಅವರು ಶ್ಲಾಘಿಸಿದರು.

2025– ಭಾರತ ಮತ್ತು ಅಂಗೋಲಾ ನಡುವಿನ ರಾಜತಾಂತ್ರಿಕ ಸಂಬಂಧಗಳ 40ನೇ ವಾರ್ಷಿಕೋತ್ಸವವನ್ನು ಅಂಗೋಲಾದ ಸ್ವಾತಂತ್ರ್ಯದ ಸುವರ್ಣ ಮಹೋತ್ಸವದ ಜೊತೆಗೆ ಗುರುತಿಸುವುದರಿಂದ ವಿಶೇಷ ಮಹತ್ವವನ್ನು ಹೊಂದಿದೆ ಎಂದು ಅವರು ಹೇಳಿದರು.

ಇದಕ್ಕೂ ಮುನ್ನ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಲುವಾಂಡಾದಲ್ಲಿ ಸಶಸ್ತ್ರ ಪಡೆಗಳ ವಸ್ತುಸಂಗ್ರಹಾಲಯಕ್ಕೆ ಭೇಟಿ ನೀಡಿದರು.

****************

ಬಿಹಾರ ವಿಧಾನಸಭೆಯ ಎರಡನೇ ಹಂತದ ಚುನಾವಣೆಗೆ ಎಲ್ಲಾಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಈ ಹಂತದಲ್ಲಿ 20 ಜಿಲ್ಲೆಗಳ 122 ಕ್ಷೇತ್ರಗಳಿಗೆ ನಾಳೆ ಮತದಾನ ನಡೆಯಲಿದೆ.

3 ಕೋಟಿ 70 ಲಕ್ಷಕ್ಕೂ ಹೆಚ್ಚು ಮತದಾರರು 136 ಮಹಿಳೆಯರು ಸೇರಿದಂತೆ 1 ಸಾವಿರದ 302 ಅಭ್ಯರ್ಥಿಗಳ ಭವಿಷ್ಯವನ್ನು ನಿರ್ಧರಿಸಲಿದ್ದಾರೆ.

7 ಕ್ಷೇತ್ರಗಳನ್ನು ಹೊರತುಪಡಿಸಿ ಬೆಳಗ್ಗೆ 7 ಗಂಟೆಗೆ ಮತದಾನ ಪ್ರಾರಂಭವಾಗಲಿದ್ದು, ಸಂಜೆ 6 ಗಂಟೆಗೆ ಮುಕ್ತಾಯಗೊಳ್ಳಲಿದೆ. ಈ ಹಂತದ ಬಹಿರಂಗ ಪ್ರಚಾರ ನಿನ್ನೆ ಸಂಜೆ ಕೊನೆಗೊಂಡಿತು.

ಮೊದಲ ಹಂತಕ್ಕೆ ಕಳೆದ 6 ರಂದು ಮತದಾನ ನಡೆದಿದ್ದು, ಇದು ಸುಮಾರು ಶೇಕಡ 65 ರಷ್ಟು ದಾಖಲೆ ಪ್ರಮಾಣದಲ್ಲಿ ಮತದಾನವಾಗಿದೆ. ಈ ತಿಂಗಳ 14 ರಂದು ಮತ ಎಣಿಕೆ ನಡೆಯಲಿದೆ.

****************

ಬಿಹಾರ ವಿಧಾನಸಭಾ ಚುನಾವಣೆಯಲ್ಲದೆ, 7 ರಾಜ್ಯಗಳ ಎಂಟು ವಿಧಾನಸಭಾ ಕ್ಷೇತ್ರಗಳಿಗೆ ನಾಳೆ ಉಪಚುನಾವಣೆ ನಡೆಯಲಿದೆ.

ಜಮ್ಮು ಮತ್ತು ಕಾಶ್ಮೀರದ ಬುದ್ಗಾಮ್ ಮತ್ತು ನಗ್ರೋಟಾ, ರಾಜಸ್ಥಾನದ ಅಂತಾ, ಜಾರ್ಖಂಡ್ ನ ಘಟ್ಶಿಲಾ, ತೆಲಂಗಾಣದ ಜುಬಿಲಿ ಹಿಲ್ಸ್, ಪಂಜಾಬ್ ನ ತರ್ನ್ ತರನ್, ಮಿಜೋರಾಂನ ದಂಪಾ ಮತ್ತು ಒಡಿಶಾದ ನುವಾಪಾಡಾ ಕ್ಷೇತ್ರಗಳಿಗೆ ಚುನಾವಣೆ ನಡೆಯುತ್ತಿದೆ.

ಬಿಹಾರ ವಿಧಾನಸಭಾ ಚುನಾವಣೆಯ ಜೊತೆಗೆ ನವೆಂಬರ್ 14 ರಂದು ಮತ ಎಣಿಕೆ ನಡೆಯಲಿದೆ.

****************

ಪ್ರಧಾನಿ ನರೇಂದ್ರ ಮೋದಿ ಭೂತಾನ್‌ಗೆ ನಾಳೆಯಿಂದ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿ ಮೋದಿ ಹಾಗೂ ಭೂತಾನ್ ದೊರೆ ಜಿಗ್ಮೆ ಕೇಸರ್ ನ್ಯಾಮಗೆಲ್ ವಾಂಗ್‌ಚುಕ್ ಜಂಟಿಯಾಗಿ ಪುನ್ಯಾತ್‌ಸ್ಯಾಂಗ್‌ಚು ಜಲವಿದ್ಯುತ್ 2ನೇ ಯೋಜನೆಯನ್ನು ಉದ್ಘಾಟಿಸಲಿದ್ದಾರೆ.

ಒಂದು ಸಾವಿರದ 20 ಮೆಗಾವ್ಯಾಟ್ ಸಾಮರ್ಥ್ಯದ ಈ ಜಲವಿದ್ಯುತ್ ಯೋಜನೆಯನ್ನು ಭಾರತ ಹಾಗೂ ಭೂತಾನ್ ಜಂಟಿಯಾಗಿ ಅಭಿವೃದ್ಧಿಪಡಿಸಿವೆ. ಪ್ರಧಾನಿಯವರು ಭೂತಾನ್‌ನ 4ನೇ ದೊರೆ ಜಿಗ್ಮೆ ವಾಂಗ್ ಚುಕ್ ಅವರ 70ನೇ ಜನ್ಮ ದಿನೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ ಹಾಗೂ ಭೂತಾನ್ ಪ್ರಧಾನಿ ಟೆಶೆರಿಂಗ್ ತೊಬ್ಗೆ ಅವರನ್ನು ಭೇಟಿ ಮಾಡಲಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ, ಜಾಗತಿಕ ಶಾಂತಿ ಪ್ರಾರ್ಥನಾ ಉತ್ಸವದಲ್ಲಿ ಪಾಲ್ಗೊಂಡು, ಥಿಂಪುವಿನ ತಶಿಚಾಡಜೊಂಗ್‌ನಲ್ಲಿ ಇರುವ ಪವಿತ್ರ ಅವಶೇಷಗಳಿಗೆ ಪ್ರಾರ್ಥನೆ ಸಲ್ಲಿಸಲಿದ್ದಾರೆ.

ಪ್ರಧಾನಿಯವರ ಈ ಭೇಟಿ ಉಭಯ ದೇಶಗಳ ಪ್ರಾದೇಶಿಕ ಹಾಗೂ ಪರಸ್ಪರ ಹಿತಾಸಕ್ತಿಯ ವಿಚಾರ ಕುರಿತ ಚರ್ಚೆಗೆ ಅವಕಾಶ ಕಲ್ಪಿಸಲಿದ್ದು, ದ್ವಿಪಕ್ಷೀಯ ಸಹಭಾಗಿತ್ವ ಬಲಗೊಳ್ಳಲು ಅವಕಾಶ ಕಲ್ಪಿಸುತ್ತಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

****************

2024–25ನೇ ಸಾಲಿನಲ್ಲಿ ಭಾರತ ಸುಮಾರು 1 ಲಕ್ಷ 51 ಕೋಟಿ ರೂಪಾಯಿ ಮೌಲ್ಯದ ರಕ್ಷಣಾ ಉತ್ಪಾದನೆಯನ್ನು ಸಾಧಿಸಿದೆ. ರಕ್ಷಣಾ ಕ್ಷೇತ್ರದಲ್ಲಿ ಸಾರ್ವಜನಿಕ ವಲಯದ ಉದ್ಯಮಗಳು ಒಟ್ಟು ಶೇಕಡ 71.6 ರಷ್ಟು ಕೊಡುಗೆ ನೀಡಿವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ.

ನವದೆಹಲಿಯ ವಿಶ್ವ ವ್ಯಾಪಾರ ಕೇಂದ್ರದಲ್ಲಿ ಇಂದು ನೂತನ ರಕ್ಷಣಾ ಕ್ಷೇತ್ರದ ಸಾರ್ವಜನಿಕ ವಲಯದ ಉದ್ಯಮಗಳ ಭವನ ಉದ್ಘಾಟಿಸಿದ ನಂತರ ಮಾತನಾಡಿದ ಅವರು, ರಕ್ಷಣಾ ರಫ್ತು 6 ಸಾವಿರದ 695 ಕೋಟಿ ರೂಪಾಯಿಗಳನ್ನು ತಲುಪಿದೆ. ಇದು ಭಾರತದ ದೇಶೀಯ ವ್ಯವಸ್ಥೆಗಳಲ್ಲಿ ಜಾಗತಿಕ ವಿಶ್ವಾಸವನ್ನು ಒತ್ತಿ ಹೇಳುತ್ತದೆ ಎಂದರು.

ಭಾರತವನ್ನು ಜಾಗತಿಕ ರಕ್ಷಣಾ ಕೇಂದ್ರವನ್ನಾಗಿ ಮಾಡಲು ಸಂಶೋಧನೆ ಮತ್ತು ಅಭಿವೃದ್ಧಿ, ದೇಶೀಕರಣ ಮತ್ತು ರಫ್ತುಗಳನ್ನು ಹೆಚ್ಚಿಸುವಂತೆ ಸಾರ್ವಜನಿಕ ವಲಯದ ಉದ್ಯಮಗಳನ್ನು ಒತ್ತಾಯಿಸಿದರು.

ಆಪರೇಷನ್ ಸಿಂಧೂರ್‌ನಂತರ ಕಾರ್ಯಾಚರಣೆಗಳಲ್ಲಿ ದೇಶೀಯ ರಕ್ಷಣಾ ಉತ್ಪನ್ನಗಳ ಅತ್ಯುತ್ತಮ ಕಾರ್ಯಕ್ಷಮತೆಯು ಸ್ಥಳೀಯ ಉದ್ಯಮಗಳ ವಿಶ್ವಾಸಾರ್ಹತೆ ಮತ್ತು ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದರು.

****************

ಇದೇ ಡಿಸೆಂಬರ್ ಒಂದರಿಂದ 19ರವರೆಗೆ ನಡೆಯಲಿರುವ ಸಂಸತ್ತಿನ ಚಳಿಗಾಲದ ಅಧಿವೇಶನವು ಶಾಸಕಾಂಗ ವ್ಯವಹಾರ, ಸರ್ಕಾರಿ ನೀತಿಗಳು ಹಾಗೂ ಸಾರ್ವಜನಿಕ ಸಮಸ್ಯೆಗಳ ಕುರಿತು ಅರ್ಥಪೂರ್ಣ ಮತ್ತು ಕ್ರಮಬದ್ಧ ಚರ್ಚೆಗಳ ಮೇಲೆ ಕೇಂದ್ರೀಕರಿಸಲಿದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದ್ದಾರೆ.

ಕೊಹಿಮಾದಲ್ಲಿ ಇಂದು ನಡೆದ 22ನೇ ಕಾಮನ್‌ವೆಲ್ತ್ ಸಂಸದೀಯ ಸಂಗದ ಸಮ್ಮೆಳನದ ಉದ್ಘಾಟನಾ ಅಧಿವೇಶನ ಉದ್ದೇಶಿಸಿ ಮಾತನಾಡಿದ ಅವರು, ಸಂಸತ್ತಿನಲ್ಲಿ ಶಿಸ್ತು ಮತ್ತು ಸಭ್ಯತೆಯನ್ನು ಕಾಪಾಡಿಕೊಳ್ಳುವ ಮಹತ್ವವನ್ನು ಒತ್ತಿ ಹೇಳಿದರು.

ಪ್ರಜಾಪ್ರಭುತ್ವ ದೇವಾಲಯವಾದ ಸಂಸತ್‌ನಲ್ಲಿ ಸಂವಾದ ಮತ್ತು ರಚನಾತ್ಮಕ ಚರ್ಚೆಯು ನಾಗರಿಕರ ಆಕಾಂಕ್ಷೆಗಳನ್ನು ಪ್ರತಿಬಿಂಬಿಸಬೇಕು ಮತ್ತು ರಾಷ್ಟ್ರೀಯ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಓಂ ಬಿರ್ಲಾ ಪ್ರತಿಪಾದಿಸಿದರು.

****************

ನಗರ ಸಹಕಾರಿ ಬ್ಯಾಂಕುಗಳು ಮಹತ್ವಾಕಾಂಕ್ಷಿ ಯುವಕರು ಮತ್ತು ಸಮಾಜದ ಹಿಂದುಳಿದ ವರ್ಗಗಳ ಸಬಲೀಕರಣಕ್ಕೆ ಮುಂದೆ ಬರಬೇಕು ಎಂದು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಒತ್ತಾಯಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಗರ ಸಹಕಾರಿ ಸಾಲ ವಲಯದ ಅಂತಾರಾಷ್ಟ್ರೀಯ ಸಮ್ಮೇಳನ 'ಕೋ–ಅಪ್ ಕುಂಭ 2025' ಉದ್ಘಾಟಿಸಿ ಮಾತನಾಡಿದ ಅವರು, ರಾಷ್ಟ್ರೀಯ ನಗರ ಸಹಕಾರಿ ಬ್ಯಾಂಕುಗಳು ಮತ್ತು ಸಾಲ ಸಂಘಗಳ ಒಕ್ಕೂಟ ಹಾಗೂ ನಗರ ಸಂಸ್ಥೆಗಳು ಮಾರ್ಗಸೂಚಿಗಳನ್ನು ಹೊರಡಿಸಬೇಕು. ಅದರ ಆಧಾರದ ಮೇಲೆ ಪ್ರತಿ ನಗರ ಸಹಕಾರಿ ಬ್ಯಾಂಕು ತನ್ನ ಹಣಕಾಸು ರಚನೆಯನ್ನು ಮರು ವಿನ್ಯಾಸಗೊಳಿಸಬೇಕು ಎಂದರು.

ಸಹಕಾರಿ ಸಂಘಗಳನ್ನು ಬಲಪಡಿಸುವುದರ ಜೊತೆಗೆ ಸಮಾಜದ ದುರ್ಬಲ ವರ್ಗಗಳನ್ನು ಉನ್ನತೀಕರಿಸುವುದು ಇದರ ಗುರಿಯಾಗಿದೆ. ಮುಂದಿನ ಐದು ವರ್ಷಗಳಲ್ಲಿ 2 ಲಕ್ಷಕ್ಕೂ ಹೆಚ್ಚು ಜನಸಂಖ್ಯೆಯನ್ನು ಪ್ರತಿಯೊಂದು ಪಟ್ಟಣದಲ್ಲಿ ನಗರ ಸಹಕಾರಿ ಬ್ಯಾಂಕ್ ಅನ್ನು ಸ್ಥಾಪಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಅಮಿತ್ ಶಾ ತಿಳಿಸಿದರು.

ಯುವ ಪೀಳಿಗೆಯನ್ನು ಸಹಕಾರಿ ಸಂಘಗಳೊಂದಿಗೆ ಸಂಪರ್ಕಿಸಲು ಮತ್ತು ಸಹಕಾರಿ ವಲಯಕ್ಕೆ ವೃತ್ತಿಪರರನ್ನು ಸಿದ್ಧಪಡಿಸಲು ತ್ರಿಭುವನ್ ಸಹಕಾರಿ ವಿಶ್ವವಿದ್ಯಾಲಯ ಸ್ಥಾಪಿಸಲಾಗಿದೆ ಎಂದು ಅವರು ಹೇಳಿದರು.

****************

ಈ ವರ್ಷದ ಎರಡನೇ ತ್ರೈಮಾಸಿಕದಲ್ಲಿ ಭಾರತದ ನಿರುದ್ಯೋಗ ದರ ಶೇಕಡ 5.2ಕ್ಕೆ ಇಳಿದಿದೆ. ಇದು ಈ ವರ್ಷದ ಮೊದಲ ತ್ರೈಮಾಸಿಕದಲ್ಲಿ ಶೇಕಡ 5.4ರಷ್ಟಿತ್ತು.

ಅಂಕಿ–ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ ಮಾಸಿಕ ಕಾರ್ಮಿಕ ಮತ್ತು ನಿರುದ್ಯೋಗ ದತ್ತಾಂಶದ ಪ್ರಕಾರ, ಈ ವರ್ಷದ ಜುಲೈನಿಂದ ಸೆಪ್ಟೆಂಬರ್ ತ್ರೈಮಾಸಿಕದಲ್ಲಿ ಗ್ರಾಮೀಣ ಜನರ ಒಟ್ಟಾರೆ ನಿರುದ್ಯೋಗ ದರ ಶೇಕಡ 4.4ರಷ್ಟಿದ್ದರೆ, ನಗರ ಪ್ರದೇಶದ ಜನರ ನಿರುದ್ಯೋಗ ದರ ಶೇಕಡ 6.9ರಷ್ಟಿದೆ.

****************

ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿರುವ ಭಯೋತ್ಪಾದಕರು ಮತ್ತು ಖೈದಿಗಳಿಗೆ ಕರ್ನಾಟಕದ ಕಾಂಗ್ರೆಸ್ ಸರ್ಕಾರ ರಾಜಾತಿಥ್ಯ ನೀಡುತ್ತಿದೆ ಎಂದು ಬಿಜೆಪಿ ಆರೋಪಿಸಿದೆ.

ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ವಕ್ತಾರ ಶಹಜಾದ್ ಪುನಾವಾಲಾ, ಹರಿಯಾಣ ಹಾಗೂ ಜಮ್ಮು–ಕಾಶ್ಮೀರದಲ್ಲಿ ಪ್ರಮುಖ ಇಸ್ಲಾಮಿಕ್ ಭಯೋತ್ಪಾದನಾ ಸಂಚನ್ನು ಭೇದಿಸಲಾಗಿದೆ.

ಈ ಮೂಲಕ ಭಯೋತ್ಪಾದನೆ ವಿರುದ್ಧ ಕೇಂದ್ರ ಸರ್ಕಾರದ ಶೂನ್ಯ ಸಹಿಷ್ಣುತೆ ನೀತಿ ಸ್ಪಷ್ಟವಾಗಿ ಗೋಚರಿಸುತ್ತದೆ. ಆದರೆ ಮತ್ತೊಂದೆಡೆ ಕಾಂಗ್ರೆಸ್ ಭಯೋತ್ಪಾದನೆ ವಿರುದ್ಧ ಮೃದು ಧೋರಣೆ ತಳೆದಿದೆ. ಮತ್ತು ಜೈಲಿನಲ್ಲಿರುವ ಭಯೋತ್ಪಾದಕರಿಗೆ ರಾಜಾತಿಥ್ಯ ನೀಡುತ್ತಿದೆ ಎಂದು ದೂರಿದರು.

****************

ಆರೋಗ್ಯ ರಕ್ಷಣೆ, ಕೃಷಿ ಮತ್ತು ಕೈಗಾರಿಕೆಗಳಲ್ಲಿ ನೈಜ ಪರಿಹಾರಗಳನ್ನು ಒದಗಿಸಲು ಜೈವಿಕ ತಂತ್ರಜ್ಞಾನವು ಪ್ರಯೋಗಾಲಯ ಸಂಶೋಧನೆಯನ್ನು ಮೀರಿ ಮುಂದುವರೆದಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ.

ನವದೆಹಲಿಯಲ್ಲಿಂದು ನಡೆದ ಎರಡನೇ ಜೈವಿಕ ತಂತ್ರಜ್ಞಾನ ಸಂಶೋಧನೆ ಮತ್ತು ನಾವೀನ್ಯತೆ ಮಂಡಳಿಯ ಸಂಸ್ಥಾಪಕ ದಿನಾಚರಣೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

****************

ಚಿಲಿಯ ಸ್ಯಾಂಟಿಯಾಗೊದಲ್ಲಿ ನವೆಂಬರ್ 25 ರಿಂದ ಡಿಸೆಂಬರ್ 13ರವರೆಗೆ ನಡೆಯಲಿರುವ ಮುಂಬರುವ ಅಂತಾರಾಷ್ಟ್ರೀಯ ಹಾಕಿ ಫೆಡರೇಷನ್ ಮಹಿಳಾ ಜೂನಿಯರ್ ಹಾಕಿ ವಿಶ್ವಕಪ್ 2025ಕ್ಕೆ ಹಾಕಿ ಇಂಡಿಯಾ ಇಂದು 20 ಸದಸ್ಯರ ತಂಡವನ್ನು ಪ್ರಕಟಿಸಿದೆ.

ಭಾರತ ತಂಡವನ್ನು ಜ್ಯೋತಿ ಸಿಂಗ್ ಮುನ್ನಡೆಸಲಿದ್ದಾರೆ. ತಂಡಕ್ಕೆ ಭಾರತೀಯ ಕೋಚ್, ಮಾಜಿ ಆಟಗಾರ ತುಷಾರ್ ಖಾಂಡ್ಕರ್ ತರಬೇತಿ ನೀಡಲಿದ್ದಾರೆ.

ಗುಂಪಿ ಸಿ ವಿಭಾಗದಲ್ಲಿ ಭಾರತ ಜರ್ಮನಿ ಮತ್ತು ನಮೀಬಿಯಾ ತಂಡಗಳು ಇವೆ.

********ಮುಕ್ತಾಯ*******